ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಗುಣಮಟ್ಟದ ಸೇವೆ ದೊರೆಯುವ ವ್ಯವಸ್ಥೆ

ಬೆಂಗಳೂರು, ಸೆ.2: ಸಮಾಜದಲ್ಲಿ ಬಡವರು ಮತ್ತು ಕೆಳಮಧ್ಯಮ ವರ್ಗದವರು ಸರಕಾರಿ ಆಸ್ಪತ್ರೆಗಳ ಮೇಲೆಯೇ ಅವಲಂಬಿಸಿದ್ದು, ಖಾಸಗಿ ಆಸ್ಪತ್ರೆಯಲ್ಲಿ ದೊರೆಯುವಂತಹ ಗುಣಮಟ್ಟದ ಆರೋಗ್ಯ ಸೌಲಭ್ಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ದೊರೆಯುವ ವ್ಯವಸ್ಥೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸೋಮವಾರ ಶಿವಾಜಿನಗರದ ಚರಕ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಸೂಪರ್ ಸ್ಪೆಷಾಲಿಟಿ ಚಿಕಿತ್ಸಾ ವ್ಯವಸ್ಥೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, 2016-17ರಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮೈಸೂರು, ಗುಲಬರ್ಗಾ, ಬೆಳಗಾವಿ ಹಾಗೂ ಶಿವಾಜಿನಗರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ನಿರ್ಮಿಸುವ ಯೋಜನೆಯನ್ನು ಕೈಗೊಳ್ಳಲಾಗಿತ್ತು. ಇದನ್ನು ಇಂದು ಸಕಾರಗೊಳಿಸಲಾಗುತ್ತಿದೆ ಎಂದರು.

ಓಟಿ ಸೇರಿದಂತೆ ಹಲವು ಅತ್ಯಾಧುನಿಕ ಸೌಲಭ್ಯಗಳನ್ನು ಆಸ್ಪತ್ರೆಯಲ್ಲಿ ಒದಗಿಸಲಾಗಿದೆ. ಬಡವರಿಗೆ ಸಹಾಯ ಒದಗಿಸುವುದು ನಮ್ಮ

ಸರಕಾರದ ಬದ್ಧತೆ. ಯಾವುದೇ ಜಾತಿ, ಧರ್ಮದ ಬೇಧವಿಲ್ಲದೆ, ಎಲ್ಲ ಬಡವರಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿ ತುಂಬಿ ಮುಖ್ಯವಾಹಿನಿಗಿ ಬರುವಂತಾಗಲು ಗ್ಯಾರಂಟಿ ಯೋಜನೆಗಳನ್ನು ಸರಕಾರ ಜಾರಿಗೊಳಿಸಿದ್ದು, 52,009 ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಮೀಸಲಿಡಲಾಗಿದೆ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಐದು ಗ್ಯಾರಂಟಿ ಯೋಜನೆಗಳ ಜೊತೆಯಲ್ಲಿ ಆರೋಗ್ಯ ಮತ್ತು ಶಿಕ್ಷಣದ ಗ್ಯಾರಂಟಿಯನ್ನು ಕಾಂಗ್ರೆಸ್ ಸರಕಾರ ನೀಡುತ್ತಿದೆ. ಗ್ಯಾರಂಟಿಗಳನ್ನು ನೀಡಿದ್ದು ಚುನಾವಣೆಗಲ್ಲ. ಜನರ ಬದುಕಿನಲ್ಲಿ ಬದಲಾವಣೆ ತರಲು. ಕರ್ನಾಟಕವನ್ನು ಹಸಿವು, ಬಡತನ ಮತ್ತು ಅಸಮಾನತೆ ಮುಕ್ತ ರಾಜ್ಯ ಮಾಡಬೇಕೆಂಬುದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರದ ಗುರಿ ಎಂದು ಹೇಳಿದರು.

ನಮ್ಮ ರಾಜ್ಯದಲ್ಲಿ 70ಕ್ಕೂ ಹೆಚ್ಚು ವೈದ್ಯಕೀಯ ಕಾಲೇಜುಗಳಿವೆ. ಸುಮಾರು 1 ಸಾವಿರಕ್ಕೂ ಹೆಚ್ಚು ಪ್ಯಾರಾ ಮೆಡಿಕಲ್ ಕಾಲೇಜುಗಳಿವೆ. ದೇಶದ ಯಾವ ರಾಜ್ಯಗಳಲ್ಲೂ ಇಲ್ಲದ ವೈದ್ಯಕೀಯ ಶಿಕ್ಷಣ ಸೌಲಭ್ಯ ನಮ್ಮಲ್ಲಿದೆ. ವಿದೇಶಗಳಿಂದ ಜನರು ಬಂದು ನಮ್ಮ ಸರಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕರ್ನಾಟಕ ಹೆಲ್ತ್ ಟೂರಿಸಂಗೆ ಹೆಸರಾಗುತ್ತಿದೆ ಎಂದು ಅವರು ತಿಳಿಸಿದರು.

ಶಿವಾಜಿನಗರ ಕ್ಷೇತ್ರ ರಿಝ್ವಾನ್ ಅರ್ಶದ್ ನೇತೃತ್ವದಲ್ಲಿ ಬೇರೆ ಯಾವ ಕ್ಷೇತ್ರಗಳಿಗೂ ಕಡಿಮೆ ಇಲ್ಲದಂತೆ ಅಭಿವೃದ್ಧಿ ಹೊಂದುತ್ತಿದೆ. ಗ್ರೇಟರ್ ಬೆಂಗಳೂರು ವಿಧೇಯಕ ಪರಿಶೀಲನೆ ಮತ್ತು ವರದಿಗಾಗಿ ವಿಧಾನ ಮಂಡಲ ಜಂಟಿ ಪರಿಶೀಲನಾ ಸಮಿತಿ ಅಧ್ಯಕ್ಷರಾಗಿ ರಿಝ್ವಾನ್ ರನ್ನು ನೇಮಕ ಮಾಡಲಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಶಿವಾಜಿನಗರದ ಶಾಸಕ ರಿಝ್ವಾನ್ ಅರ್ಶದ್ ಮತ್ತಿತರರು ಇದ್ದರು.

ಬಿಜೆಪಿಗೆ ಸುಳ್ಳು ಹೇಳುವುದೇ ಕಾಯಕ

ಬಿಜೆಪಿ ಬಡವರಪರ ಕೆಲಸ ಮಾಡುವುದನ್ನು ಸಹಿಸುವುದಿಲ್ಲ. ಬಡವರು ಶಕ್ತಿವಂತರಾದರೆ, ಅವರ ಮೇಲೆ ಶೋಷಣೆ ಮಾಡಲು ಸಾಧ್ಯವಾಗುವುದಿಲ್ಲ. ಆದುದರಿಂದ ಬಿಜೆಪಿಯವರು ಸುಳ್ಳನ್ನು ಸತ್ಯ ಮಾಡಲು ಹೊರಟಿದ್ದಾರೆ. ಸಾಮಾಜಿಕ ನ್ಯಾಯವನ್ನು ಕೇಳಬಾರದೆಂಬುದೇ ಬಿಜೆಪಿಯಂತಹ ಪಟ್ಟಭದ್ರಹಿತಾಸಕ್ತಿಗಳ ಆಶಯವಾಗಿದೆ. ಜನರ ಆಶೀರ್ವಾದವಿರುವರೆಗೆ ಸಿದ್ದರಾಮಯ್ಯನನ್ನು ಅಲುಗಾಡಿಸಲು ಸಾಧ್ಯವಿಲ್ಲ.

-ಸಿದ್ದರಾಮಯ್ಯ, ಮುಖ್ಯಮಂತ್ರಿ

ಹಾಳಾದ ರಸ್ತೆಗಳ ಪ್ರಗತಿ ತೃಪ್ತಿಕರವಾಗಿಲ್ಲ: ಪ್ರಿಯಾಂಕ್ ಖರ್ಗೆ

ಬೆಂಗಳೂರು, ಸೆ.2: ಅತಿವೃಷ್ಟಿಯಿಂದ ಹಾಳಾಗಿರುವ ಗ್ರಾಮೀಣ ರಸ್ತೆಗಳನ್ನು ದುರಸ್ತಿ ಮಾಡಲು ಸಾಕಷ್ಟು ಅನುದಾನ ಲಭ್ಯವಿದ್ದಾಗ್ಯೂ ಪ್ರಗತಿ ತೃಪ್ತಿಕರವಾಗಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸೋಮವಾರ ನಗರದಲ್ಲಿ ರಾಜ್ಯದ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ನಡೆಸಿದ ವೀಡಿಯೊ ಸಭೆಯಲ್ಲಿ ಮಾತನಾಡಿದ ಅವರು, ಶೀಘ್ರದಲ್ಲಿ ಕಾಮಗಾರಿಗಳನ್ನು ಮುಗಿಸದಿದ್ದಲ್ಲಿ ಎಇಇಗಳನ್ನು ಹೊಣೆಗಾರರನ್ನಾಗಿ ಮಾಡಿ ಅಮಾನತು ಪಡಿಸಲು ಹಾಗೂ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಸೂಚನೆ ನೀಡಿದರು.

ಪ್ರಗತಿಪಥ ಹಾಗೂ ಕಲ್ಯಾಣಪಥ ಕಾರ್ಯಕ್ರಮಗಳು ಕೇವಲ ರಸ್ತೆ ನಿರ್ಮಾಣ ಮಾತ್ರವಲ್ಲ. ರಾಜ್ಯವನ್ನು ಪ್ರಗತಿಯತ್ತ ತೆಗೆದುಕೊಂಡು ಹೋಗುವ ಹಾಗೂ ಆರ್ಥಿಕ ಅಭಿವೃದ್ಧಿಗೆ ಪೂರಕವಾದ ಯೋಜನೆಗಳು. ಈ ಎರಡೂ ಯೋಜನೆಗಳಡಿ ಗ್ರಾಮೀಣಾಭಿವೃದ್ಧಿ ಇಲಾಖೆಯ ಇಂಜನಿಯರುಗಳು ಯೋಜನಾ ವರದಿಗಳನ್ನು ಸಿದ್ಧಪಡಿಸಿ ಸೆ.17ರೊಳಗೆ ಮಂಜೂರಾತಿ ಕೋರಿ ಸಲ್ಲಿಸಬೇಕು. ಗುಣಮಟ್ಟದಲ್ಲಿ ಯಾವುದೆ ರಾಜಿ ಇಲ್ಲದಂತೆ ರಸ್ತೆಗಳನ್ನು ಸುಸ್ಥಿರ ರೀತಿಯಲ್ಲಿ ನಿರ್ಮಾಣ ಮಾಡಬೇಕು ಎಂದು ಪ್ರಿಯಾಂಕ್ ಖರ್ಗೆ ಆದೇಶ ನೀಡಿದರು.

ಘನತ್ಯಾಜ್ಯ ವಿಲೇವಾರಿ ಸಂಬಂಧದಲ್ಲಿ ಗ್ರಾಮೀಣ ಭಾಗಗಳಲ್ಲಿ ಮಹಿಳಾ ಚಾಲಕರನ್ನು ಒಳಗೊಂಡ ವಾಹನಗಳನ್ನು ಸಿದ್ಧಪಡಿಸಲಾಗಿದೆ. ಈ ಚಾಲಕರಿಗೆ ವೇತನ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡುವಲ್ಲಿ ಯಾವುದೆ ಲೋಪವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಪ್ರಿಯಾಂಕ್ ಖರ್ಗೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಅಭಿವೃದ್ಧಿ ಆಯುಕ್ತ ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಉಮಾ ಮಹದೇವನ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಝ್, ಪಂಚಾಯತ್ ರಾಜ್ ಆಯುಕ್ತೆ ಡಾ.ಅರುಂದತಿ ಚಂದ್ರಶೇಖರ್, ನರೇಗ ಆಯುಕ್ತ ಪವನ್ ಕುಮಾರ್ ಮಾಲಪಾಟಿ, ಗ್ರಾಮೀಣ ನೀರು ಸರಬರಾಜು ನಿರ್ದೇಶಕ ಕೆ.ನಾಗೇಂದ್ರ ಪ್ರಸಾದ್, ಇ-ಆಡಳಿತ ನಿರ್ದೇಶಕ ಡಾ.ಕೆ.ನಂದಿನಿದೇವಿ ಮತ್ತಿತರ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ಮೈಸೂರು ದಸರಾ ಮಾದರಿಯಲ್ಲಿ 'ತುಮಕೂರು ದಸರಾ'

ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆಯಲ್ಲಿ ಡಾ.ಜಿ.ಪರಮೇಶ್ವರ್

ತುಮಕೂರು, ಸೆ.2: ವಿಶ್ವ ಪ್ರಸಿದ್ಧ ಮೈಸೂರು ದಸರಾ ಮಾದರಿಯಲ್ಲಿ ಅ.11 ಹಾಗೂ 12ರಂದು 2 ದಿನಗಳ ಕಾಲ ತುಮಕೂರು ದಸರಾ ಕಾರ್ಯಕ್ರಮವನ್ನು ಆಯೋಜಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಸೋಮವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, 36 ವರ್ಷಗಳಿಂದ ವಿವಿಧ ಸಂಘಟನೆಗಳನ್ನೊಳಗೊಂಡ ದಸರಾ ಸಮಿತಿಯಿಂದ ನಗರದಲ್ಲಿ ದಸರಾ ಉತ್ಸವವನ್ನು ಆಚರಿಸಿಕೊಂಡು ಬರಲಾಗುತ್ತಿದ್ದು, ಈ ದಸರಾ ಉತ್ಸವವನ್ನು ಮತ್ತಷ್ಟು ಮೆರಗುಗೊಳಿಸಲು ಜಿಲ್ಲಾಡಳಿತದ ವತಿಯಿಂದ ಈ ವರ್ಷ ಮೊದಲ ಬಾರಿಗೆ ತುಮಕೂರು ದಸರಾ ಉತ್ಸವವನ್ನು ಆಯೋಜಿಸಲು ನಿರ್ಧರಿಸಲಾಗಿದ್ದು, ಉತ್ಸವದ ಯಶಸ್ವಿಗೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶಿಸಿದರು.

ತುಮಕೂರು ದಸರಾ ಉತ್ಸವದಲ್ಲಿ ಜಿಲ್ಲೆಯ ಸಾಹಿತ್ಯ, ಸಂಸ್ಕೃತಿ, ಕ್ರೀಡೆಯ ಹಿರಿಮೆಯನ್ನು ಹೆಚ್ಚಿಸುವಂತಹ ಕಾರ್ಯಕ್ರಮಗಳನ್ನು ರೂಪಿಸಬೇಕು. ದಸರಾ ಸಾಂಸ್ಕೃತಿಕ ಹಬ್ಬವನ್ನು ಪಕ್ಷಬೇಧವಿಲ್ಲದೆ ಜಿಲ್ಲೆಯ ಶಾಸಕರು, ಸಂಸದರು, ಸಚಿವರು ಸೇರಿ ಎಲ್ಲ ಚುನಾಯಿತ ಪ್ರತಿನಿಧಿಗಳು, ಸಾರ್ವಜನಿಕರು ಒಗ್ಗೂಡಿ ಆಚರಿಸಬೇಕೆಂದರಲ್ಲದೆ ದಸರಾ ಕಾರ್ಯಕ್ರಮದಲ್ಲಿ ಹಮ್ಮಿಕೊಳ್ಳಬಹುದಾದ ಧಾರ್ಮಿಕ ಆಚರಣೆ, ಜಂಬೂಸವಾರಿ, ಸಾಹಿತ್ಯ-ಕಲೆ-ಸಾಂಸ್ಕೃತಿಕ ಕಾರ್ಯಕ್ರಮ,ಆಹಾರ ಮೇಳಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ದಸರಾ ಉತ್ಸವದ ಮುಖ್ಯ ವೇದಿಕೆಯನ್ನು ನಗರದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಿರ್ಮಿಸಲು ಅಗತ್ಯ ಸಿದ್ಧತೆಗಳನ್ನು ಯೋಜಿಸಲಾಗಿದ್ದು, ಸಿದ್ಧಪಡಿಸಿರುವ ದಸರಾ ಉತ್ಸವದ ರೂಪು-ರೇಷೆಗಳ ಬಗ್ಗೆ ಸಚಿವರಿಗೆ ಮಾಹಿತಿ ನೀಡಿದರು.

ಸೆ.15ರಂದು ದಸರಾ ಉತ್ಸವದ ಲಾಂಛನ(ಲೋಗೋ)ವನ್ನು ಬಿಡುಗಡೆ ಮಾಡಲಾಗುವುದೆಂದು ಮಾಹಿತಿ ನೀಡಿದ ಅವರು, ತುಮಕೂರು ದಸರಾ ಕಾರ್ಯಕ್ರಮದ ಅಂಗವಾಗಿ ಏರ್ಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ನೃತ್ಯರೂಪಕ, ಚಿತ್ರನಟ-ನಟಿ, ಪ್ರಸಿದ್ಧ ಗಾಯಕ, ಜಿಲ್ಲೆಯ ಹಿನ್ನೆಲೆಯುಳ್ಳ ಕಲಾವಿದರನ್ನು ಕರೆಸುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಸಿದರು.

ಸಭೆಯಲ್ಲಿ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್, ಸುರೇಶ್ ಗೌಡ, ಜಿಲ್ಲಾ ಪಂಚಾಯತ್ ಸಿಇಒ ಜಿ.ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ, ಉಪ ಅರಣ್ಯ ಸಂರಕ್ಷಣಾಧಿಕಾರಿ ಅನುಪಮ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಜಿ.ಹಿಮಂತರಾಜು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖಾಧಿಕಾರಿಗಳು ಉಪಸ್ಥಿತರಿದ್ದರು.

ಆಸ್ತಿದಾರರು ತಮ್ಮ ಸ್ಥಿರಾಸ್ತಿಗಳನ್ನು ತುಮಕೂರು ಜಿಲ್ಲಾ ವ್ಯಾಪ್ತಿಯ ಯಾವುದೇ ಉಪನೋಂದಣಾ ಕಚೇರಿಗಳಲ್ಲಿ ನೋಂದಾಯಿಸಿಕೊಳ್ಳುವ ಬಗ್ಗೆ ಸ್ಥಾಪಿಸಿರುವ ಎನಿವೇರ್ ನೋಂದಣಿ ಸಹಾಯವಾಣಿ ಸಂಖ್ಯೆಯ 080-68265316ನ್ನೊಳಗೊಂಡ ಪೋಸ್ಟರ್ ಹಾಗೂ ರೇಷ್ಮೆ ಬೆಳೆಯನ್ನು ಬಾಧಿಸುವ ಕೀಟ ನಿರ್ವಹಣಾ ವಿಧಾನದ ಬಗ್ಗೆ ರೇಷ್ಮೆ ಇಲಾಖೆಯಿಂದ ಹೊರತಂದಿರುವ ಕರಪತ್ರವನ್ನು ಬಿಡುಗಡೆ ಮಾಡಲಾಯಿತು.

ಪ್ರಧಾನಮಂತ್ರಿ ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನ

ಚಾಮರಾಜನಗರ, ಸೆ.2: 2024-25ನೇ ಸಾಲಿನಲ್ಲಿ ಮೊದಲನೇ ವರ್ಷದಲ್ಲಿ ವೃತ್ತಿಪರ ಕೋರ್ಸ್ ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ (ಸೇನಾಧಿಕಾರಿಗಳ ಮಕ್ಕಳನ್ನು ಹೊರತುಪಡಿಸಿ) ಕೇಂದ್ರೀಯ ಸೈನಿಕ ಮಂಡಳಿಯಿಂದ ನೀಡಲಾಗುವ ಪ್ರಧಾನಮಂತ್ರಿ ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ನವೆಂಬರ್ 30 ಕಡೆಯ ದಿನವಾಗಿದ್ದು, ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು www.ksb.gov.inನಲ್ಲಿ ಸಲ್ಲಿಸಬಹುದೆಂದು ಮೈಸೂರಿನ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶೀಘ್ರವೇ ಗೃಹಲಕ್ಷ್ಮಿ ಯೋಜನೆ ಹಣ ಸಂದಾಯ: ಲಕ್ಷ್ಮೀ ಹೆಬ್ಬಾಳ್ಕರ್

ಬೆಂಗಳೂರು/ಚಿತ್ರದುರ್ಗ, ಸೆ.2: ಜುಲೈ ಹಾಗೂ ಆಗಸ್ಟ್ ತಿಂಗಳ ಗೃಹಲಕ್ಷ್ಮಿ ಯೋಜನೆಯ ಹಣ ಶೀಘ್ರವೇ ಮನೆಯಜಮಾನಿಯರ ಖಾತೆಗೆ ಸಂದಾಯವಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದುವರೆಗೆ 11 ತಿಂಗಳ ಮೊತ್ತ ಸಂದಾಯವಾಗಿದ್ದು, ಶೀಘ್ರವೇ ಜುಲೈ ಹಾಗೂ ಆಗಸ್ಟ್ ತಿಂಗಳ ಹಣವೂ ಸಂದಾಯವಾಗಲಿದೆ. ಕೆಲವೊಂದು ತಾಂತ್ರಿಕ ಕಾರಣಗಳಿಂದ ಏಕಾಲದಲ್ಲಿ ಹಣ ಸಂದಾಯವಾಗುತ್ತಿಲ್ಲ. ಒಂದು ವರ್ಷದಲ್ಲಿ 25 ಸಾವಿರ ಕೋಟಿ ರೂ. ಮೊತ್ತವನ್ನು ಯೋಜನೆಗೆ ವ್ಯಯಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕೋವಿಡ್ ವೇಳೆ ಬಿಜೆಪಿ ಸಚಿವರು ಮಾಡಿದ್ದ ಭ್ರಷ್ಟಾಚಾರ ಇಡೀ ರಾಜ್ಯಕ್ಕೆ ಗೊತ್ತಿದೆ. ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರೇ, ಮಾಸ್ಕ್, ಆಕ್ಸಿಜನ್, ಬೆಡ್ ಖರೀದಿ ಇನ್ನಿತರ ಪರಿಕರಗಳ ಖರೀದಿಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ್ದರು. ಇದೀಗ ಕೋವಿಡ್ ಕಾಲದ ಭ್ರಷ್ಟಾಚಾರ ಕುರಿತು ರಚಿಸಲಾಗಿದ್ದ ತನಿಖಾ ಸಮಿತಿ ಸರಕಾರಕ್ಕೆ ವರದಿ ನೀಡಿದ್ದು, ಈ ಕುರಿತು ಶೀಘ್ರವೇ ಸರಕಾರ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಅವರು ಹೇಳಿದರು. ನಮ್ಮದು ಸ್ಥಿರ ಹಾಗೂ ಜನಪರ ಸರಕಾರ, ಜನರ ಆಶೀರ್ವಾದದಿಂದ ಬಂದಿರುವ ಸರಕಾರವನ್ನು ಯಾರೂ ಅಲುಗಾಡಿಸಲು ಸಾಧ್ಯವಿಲ್ಲ. ಬಿಜೆಪಿ-ಜೆಡಿಎಸ್ ಪಕ್ಷಗಳು ಇದೀಗ ಕಿಚಡಿ ಮೈತ್ರಿ ಮಾಡಿಕೊಂಡಿವೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ಟೀಕಿಸಿದರು.

ಕರ್ನಾಟಕದಲ್ಲಿ ಉತ್ತಮ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸ್ಥಿರವಾದ ಸರಕಾರವನ್ನು ಅಸ್ಥಿರಗೊಳಿಸುವುದೇ ಬಿಜೆಪಿ ನಾಯಕರ ಉದ್ದೇಶ. ಸರಕಾರವನ್ನು ಅಸ್ಥಿರಗೊಳಿಸಲು ಬಿಜೆಪಿ ಏನೆಲ್ಲಾ ಪ್ರಯತ್ನ ನಡೆಸುತ್ತಿದೆ ಎಂಬುದು ರಾಜ್ಯದ ಜನರಿಗೆ ಗೊತ್ತಿದೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಕಸಾಪದ 'ಡಾ.ಟಿ.ವಿ.ವೆಂಕಟಾಚಲ ಶಾಸ್ತ್ರಿ ವಿದ್ವತ್ ದತ್ತಿ ಪ್ರಶಸ್ತಿ'ಗೆ ಡಾ.ಪಿ.ಶ್ರೀಕೃಷ್ಣಭಟ್ ಆಯ್ಕೆ

ಬೆಂಗಳೂರು, ಸೆ.2: ಕನ್ನಡ ಸಾಹಿತ್ಯ ಪರಿಷತ್‌ನ ಪ್ರತಿಷ್ಠಿತ 'ಡಾ.ಟಿ.ವಿ.ವೆಂಕಟಾಚಲ ಶಾಸ್ತ್ರಿ ವಿದ್ವತ್ ದತ್ತಿ' 2024ರ ಸಾಲಿನ ಪ್ರಶಸ್ತಿಗೆ ಕಾಸರಗೋಡಿನ ಹಿರಿಯ ಸಂಶೋಧಕ ಡಾ.ಪಿ.ಶ್ರೀಕೃಷ್ಣಭಟ್ ಅವರನ್ನು ಆಯ್ಕೆ ಮಾಡಲಾಗಿದೆ.

ಡಾ.ಟಿ.ವಿ.ವೆಂಕಟಾಚಲ ಶಾಸ್ತ್ರಿಗಳ ಬಂಧು-ಮಿತ್ರರು ಈ ದತ್ತಿಯನ್ನು ಸ್ಥಾಪಿಸಿದ್ದು ಹಳಗನ್ನಡ ಸಾಹಿತ್ಯ, ಛಂದಸ್ಸು, ನಿಘಂಟು ರಚನೆ, ಗ್ರಂಥ ಸಂಪಾದನೆ, ಅನುವಾದ, ಭಾಷಾಶಾಸ್ತ್ರ ಮೊದಲಾದ ಶಾಸ್ತ್ರ ಸಾಹಿತ್ಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದವರಿಗೆ ಈ ಪುರಸ್ಕಾರವನ್ನು ನೀಡಲಾಗುತ್ತದೆ. ಡಾ.ಪಿ.ಶ್ರೀಕೃಷ್ಣಭಟ್ ಗಡಿ ಭಾಗದಲ್ಲಿ ಕನ್ನಡ ಭಾಷೆಯ ಅಭಿವೃದ್ಧಿಗೆ ಶ್ರಮಿಸುತ್ತಿರುವ ಅವರ ಕೊಡುಗೆಯನ್ನು ಗಮನಿಸಿ ಈ ಪುರಸ್ಕಾರಕ್ಕೆ ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಡಾ.ಮಹೇಶ್ ಜೋಶಿ ತಿಳಿಸಿದ್ದಾರೆ. ಆಯ್ಕೆ ಸಮಿತಿ ಸಭೆಯಲ್ಲಿ ದತ್ತಿದಾನಿಗಳ ಪರವಾಗಿ ಪ್ರೊ.ಎಲ್. ಎಸ್.ಶಿವಮೂರ್ತಿ, ಕನ್ನಡ ಸಾಹಿತ್ಯ ಪರಿಷತ್‌ನ ಗೌರವ ಕಾರ್ಯದರ್ಶಿ ಡಾ.ಪದ್ಮಿನಿ ನಾಗರಾಜು, ನೇ.ಭ.ರಾಮಲಿಂಗ ಶೆಟ್ಟಿ, ಗೌರವ ಕೋಶಾಧ್ಯಕ್ಷ ಬಿ.ಎಂ.ಪಟೇಲ್ ಪಾಂಡು ಭಾಗವಹಿಸಿದ್ದರು ಎಂದು ಪ್ರಕಟನೆ ತಿಳಿಸಿದೆ.

ಕರ್ನಾಟಕ ಸರ್ಕಾರ
ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ
ಲ